ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 07.10.2022

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 08–10–2022 ರಿಂದ 12–10–2022 ವರೆಗೆ)

| ನಿಯತಾಂಕಗಳು | 08.10.2022 | 09.10.2022 | 10.10.2022 | 11.10.2022 | 12.10.2022 |
|---|---|---|---|---|---|
| ಮಳೆ (ಮಿ ಮಿ) | 4 | 5 | 15 | 15 | 5 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 28 | 27 | 28 | 28 | 28 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 20 | 20 | 20 | 20 |
| ಮೋಡ ( ಪ್ರಮಾಣ) | 5 | 5 | 6 | 6 | 5 |
| ಅರ್ದ್ರತೆ 7.20 ಬೆ (ಶೇ) | 86 | 86 | 88 | 88 | 87 |
| ಅರ್ದ್ರತೆ 2.20 ಮ (ಶೇ) | 73 | 73 | 75 | 75 | 74 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 5 | 6 | 5 | 4 | 4 |
| ಗಾಳಿಯ ದಿಕ್ಕು ( ಡಿಗ್ರಿ) | 288 | 292 | 246 | 207 | 169 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆಯಾಗುವ ಸಾಧ್ಯತೆ ಇದೆ.. ದಿನದ ಗರಿಷ್ಠ ಉಷ್ಣಾಂಶ 27.0–28.0$^{o}$ C ಮತ್ತು ಕನಿಷ್ಠ 20.0$^{o}$ C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **86-88 %** ಇದ್ದು ಮಧ್ಯಾಹ್ನ **73-75 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **4–6** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

**"ಹಸ್ತಕ್ಕೆ ಹದ, ಚಿತ್ತಕ್ಕೆ ಬೆಳೆ!"**

- ಹಸ್ತ ನಕ್ಷತ್ರದ ಮಳೆಯ ಕಾಲವು ಸೆಪ್ಟೆಂಬರ್ ತಿಂಗಳ 28 ರಿಂದ ಅಕ್ಟೋಬರ್ 10 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 105.8 ಮಿ.ಮೀ. ವರೆಗೆ ಮಳೆಯಾಗುತ್ತದೆ.

## ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ ಸಲಹೆಗಳು | | 1. ರಾಗಿ ಬೆಳೆಗಳಲ್ಲಿ ಕಳೆಗಳ ಸಮಸ್ಯೆ ಹೆಚ್ಚಾಗಿರುತ್ತದೆ ಇದರ ನಿರ್ಮೂಲನೆಗೆ ಕುಂಟೆ ಹಾಯಿಸುವ ಮುಖಾಂತರ ಕಳೆ ನಿರ್ಮೂಲನೆ ಮಾಡಿ ಶಿಫಾರಿಸ್ಸಿದ ಮೇಲು ಗೊಬ್ಬರವನ್ನು ಕೊಡಿ.<br>2. ಈಗಾಗಲೇ ಬಿತ್ತನೆಯಾಗಿರುವ ತೊಗರಿ ಬೆಳೆಯಲ್ಲಿ ಅಂತರ ಬೇಸಾಯ ಮಾಡಿ. |
| ಮುಂಗಾರು ಬೆಳೆಗಳು | ಬೆಳವಣಿಗೆ ಹಂತ<br>ಹೂವಿನ ಹಂತ | **ಎರಡುಬೆಳೆ ಪದ್ಧತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ತಡವಾದ ಮುಂಗಾರು ಬೆಳೆಗಳಾದ ರಾಗಿ: ಕೆ.ಎಮ್,ಆರ್–301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್–365 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಬಿತ್ತನೆ/ನಾಟಿ ಮಾಡುವುದು. |
| ಮಾವು | | 1. ಸೆಪ್ಟೆಂಬರ್ ತಿಂಗಳಿನಲ್ಲಿ ಪ್ಯಾಕ್ಲೋಬುಟ್ರಜೋಲ್ 5 ಗ್ರಾಂ. ಪ್ರತಿ ಗಿಡಕ್ಕೆ ಸಿಂಪಡಿಸುವುದರಿಂದ ಮಾವಿನ ಗಿಡದ ಎಲ್ಲಾ ಭಾಗಗಳಲ್ಲೂ ಸಮನಾದ ಹೂವುಗಳು ಬಿಡಲು ತುಂಬಾ ಅನುಕೂಲ.<br>2. ಮಾವಿನ ತೋಪುಗಳಲ್ಲಿ ಒಣ ರೆಂಬೆ ಕೊಂಬೆಗಳನ್ನು ಕತ್ತರಿಸಿ ಹೊರಹಾಕಿ.<br>3. ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| **ರೇಷ್ಮೆ ಸಾಕಾಣಿಕೆ** | | 1. ರೇಷ್ಮೆ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು. |

| ಹೈನುಗಾರಿಕೆ | |
|---|---|
| | |
| ಪಶುಸಂಗೋಪನೆ | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಉತ್ತಮ ಮಳೆ ಮತ್ತು ತೇವಾಂಶದ ಆಧಾರದಲ್ಲಿ ಯತೇಚ್ಚ ಹುಲ್ಲು ಮತ್ತು ಮೇವು ಲಭ್ಯವಿರುವುದರಿಂದ ಹೈನುಗಾರಿಕೆ ಬಲವರ್ಧನೆಗೆ ತುಂಬಾ ಸಹಕಾರಿಯಾಗುತ್ತದೆ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಪ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.